ದಕ್ಷಿಣ ಕನ್ನಡದ ಪಶ್ಚಿಮ ವಾಹಿನಿ ಯೋಜನೆಯ ಬಗ್ಗೆ

44 (210) ಶ್ರೀ ಖಾದರ್ ಯು.ಟಿ.(ಮಂಗಳೂರು) : ಮಾನ್ಯ ಸಣ್ಣ ನೀರಾವರಿ, ಯೋಜನೆ ಹಾಗೂ ಸಾಂಖ್ಯಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡದಲ್ಲಿ ಪಶ್ಚಿಮ ವಾಹಿನಿ ಯೋಜನೆಯನ್ನು ಅನುಷ್ಠಾನಗೊಳಿಸುವ ಉದ್ದೇಶ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು;

ಇ) ಈ ಯೋಜನೆಗಾಗಿ ವಿನಿಯೋಗಿಸಲು ಕಾಯ್ದಿರಿಸುವ ಹಣವೆಷ್ಟು?

ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ, ಯೋಜನೆ ಹಾಗೂ ಸಾಂಖ್ಯಿಕ ಸಚಿವರು) :

ಅ) ಪಶ್ಚಿಮವಾಹಿನಿ ಯೋಜನೆಗೆ ಕೇಂದ್ರ ಸರ್ಕಾರದಿಂದ ಅನುಮೋದನೆ ಕೋರಿ ರೂ. 295.00 ಕೋಟಿಗಳಿಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿತ್ತು. ಆದರೆ ಕೇಂದ್ರ ಸರ್ಕಾರದ ಜಲಸಂಪನ್ಮೂಲ ಮಂತ್ರಾಲಯವು ಸಣ್ಣ ನೀರಾವರಿ ಇಲಾಖೆಯ ಯೋಜನೆಗಳಿಗೆ ಅನುದಾನ ನೀಡಲು ಮಾರ್ಗಸೂಚಿಯಲ್ಲಿ ಅವಕಾಶವಿರುವುದಿಲ್ಲವಾದ್ದರಿಂದ ರಾಜ್ಯ ಸರ್ಕಾರದ ಮಟ್ಟದಲ್ಲಿಯೇ ಕ್ರಮ ತೆಗೆದುಕೊಳ್ಳುವಂತೆ ತಿಳಿಸಿದೆ. ಈ ಹಿನ್ನೆಲೆಯಲ್ಲಿ ಪಶ್ಚಿಮವಾಹಿನಿ ಯೋಜನೆಗೆ ಕೇಂದ್ರ ಸರ್ಕಾರದಿಂದ ಅನುದಾನ ಪಡೆಯುವುದು ಸಾಧ್ಯವಾಗುವುದಿಲ್ಲ.

ಆ) ಪ್ರತಿ ವರ್ಷ ರಾಜ್ಯ ಸರ್ಕಾರದ ಆಯವ್ಯಯದಲ್ಲಿ ಲಭ್ಯವಾಗುತ್ತಿರುವ ಅನುದಾನದಿಂದ ಪಶ್ಚಿಮ ವಾಹಿನಿ ಯೋಜನೆಯಡಿ ಸೇರಿದ್ದ ಕಿಂಡಿ ಅಣೆಕಟ್ಟು ಕಾಮಗಾರಿಗಳನ್ನು ಹಂತ ಹಂತವಾಗಿ ಕೈಗೆತ್ತಿಕೊಂಡು ಪೂರ್ಣಗೊಳಿಸಲಾಗುತ್ತಿದೆ.

ಇ) ಈ ಯೋಜನೆಗಾಗಿ ಪ್ರತ್ಯೇಕವಾಗಿ ಹಣವನ್ನು ಕಾಯ್ದಿರಿಸಲಾಗಿರುವುದಿಲ್ಲ.